# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 09/ಸಭೆ/ಪಿಆರ್/ /2021-22 ದಿನಾಂಕ : 05/03/2022

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ 09 ವಿದ್ಯಾರಣ್ಯಪುರ ವಾರ್ಡ್ ಕಛೇರಿಯಲ್ಲಿ ದಿನಾಂಕ 05/03/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಶಿವಕುಮಾರ್ ಮುತ್ತುಸ್ವಾಮಿ ಗೌಡರ್, ನೋಡಲ್ ಅಧಿಕಾರಿ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ಮುತ್ತುರಾಜು ಕೆ.ಪಿ, ಅರಣ್ಯ ವಲಯ
4. ಶ್ರೀ ಧನಲಕ್ಷ್ಮಿ, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ
5. ಶ್ರೀ ನಂಜೇಗೌಡ, ತೆರಿಗೆ ಪರಿವೀಕ್ಷಕರು
6. ಶ್ರೀ ಭಾರ್ಗವ್, ಹಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ ಸಿದ್ದರಾಜು, ಕಿರಿಯ ಆರೋಗ್ಯ ಪರಿವೀಕ್ಷಕರು

**ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು**

1. ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು
2. ಸಾರ್ವಜನಿಕರು

**ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು.

**ನೋಡೆಲ್ ಅಧಿಕಾರಿ** ರವರು ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು./

**ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು**

ಎನ್.ಟಿ.ಐ ಲೇಔಟ್ ಮುಖ್ಯ ರಸ್ತೆ, ಜ್ಞಾನೇಶ್ವರಿ ಬಡಾವಣೆಯಲ್ಲಿ, ಬಿ.ಇ.ಎಲ್ 6ನೇ ಬ್ಲಾಕ್‌ನಲ್ಲಿ ಹಾಗೂ ರಾಜೀವ್‌ಗಾಂಧಿ ನಗರದಲ್ಲಿ ಮರದ ಕೊಂಬೆಗಳು ಬೃಹದಾಕಾರವಾಗಿ ಬೆಳೆದಿರುವುದರಿಂದ ಟ್ರಿಮ್ ಮಾಡಲು ಹಾಗೂ ಶಿಥಿಲಾವಸ್ಥೆಯಲ್ಲಿರುವ ಮರಗಳನ್ನು ತೆರವುಗೊಳಿಸಲು ಕೋರಿದರು

**ಕ್ರಮ:** ಉಪವಲಯ ಅರಣ್ಯ ಸಂರಕ್ಷಣಾಧಿಕಾರಿ, ಬ್ಯಾಟರಾಯನಪುರ

ಬಿ.ಇ.ಎಲ್ 6ನೇ ಬ್ಲಾಕ್, ಎನ್.ಟಿ.ಐ ಲೇಔಟ್‌ನಲ್ಲಿ ನೀರಿನ ಸಮಸ್ಯೆಯಿರುವುದಾಗಿ ಹಿಂದಿನ ಸಭೆಯಲ್ಲಿ ತಿಳಿಸಿದ್ದರೂ ಸಹ ಇಲ್ಲಿಯವರೆವಿಗೂ ನೀರಿನ ಪೂರೈಕೆಯಲ್ಲಿ ಸಮರ್ಪಕವಾಗಿರುವುದಿಲ್ಲ, ಕೊಡಿಗೆಹಳ್ಳಿ, ತಿಂಡ್ಲು, ವಿದ್ಯಾರಣ್ಯಪುರದ ಕೆಲ ರಸ್ತೆಗಳಲ್ಲಿ ಒಳಚರಂಡಿ ಮ್ಯಾನ್‌ಹೋಲ್‌ಗಳು ರಸ್ತೆ ಮಟ್ಟಕ್ಕಿಂತ ಎತ್ತರದಲ್ಲಿರುವುದರಿಂದ ಸರಿಪಡಿಸಲು ಕೋರಿದರು.

**ಕ್ರಮ:** ಸಅ, ಬಿ.ಡಬ್ಲ್ಯೂಎಸ್ಎಸ್‌ಬಿ ರವರು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಯು.ಜಿ ಕೇಬಲ್ ಅಳವಡಿಸಲು ವಾರ್ಡಿನ ಬಹುತೇಕ ಎಲ್ಲಾ ರಸ್ತೆಗಳನ್ನು ಕತ್ತರಿಸಿ ಹಾಗೆಯೇ ಬಿಟ್ಟಿರುವುದರಿಂದ ವಾಹನ ಸವಾರರಿಗೆ ಹಾಗೂ ಸ್ಥಳೀಯ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದರಿಂದ ಕಾಮಗಾರಿಯನ್ನು ಬೇಗನೇ ಪೂರ್ಣಗೊಳಿಸಲು ಕೋರಿದರು.

**ಕ್ರಮ:** ಸಕಾಅ, ಬೆಸ್ಕಾಂ

ಬಿ.ಇ.ಎಲ್ ಲೇಔಟ್ 3ನೇ ಬ್ಲಾಕ್‌ನಲ್ಲಿ ಎಲ್ಲಾ ಮುಖ್ಯ ರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಕಸ ಗುಡಿಸುತ್ತಿರುವುದಿಲ್ಲ, ಹಾಗೂ ಹೆಚ್.ಎಂ.ಟಿ ಲೇಔಟ್ 6ನೇ ಬ್ಲಾಕ್‌ನಲ್ಲಿ ಮುಖ್ಯ ರಸ್ತೆಯ ಕಸ ಗುಡಿಸುತ್ತಿರುವುದಿಲ್ಲ, ಆಂಜನೇಯ ಸ್ವಾಮಿ ದೇವಸ್ಥಾನದ ಎದುರು ಬ್ಲಾಕ್‌ಸ್ಪಾಟ್ ನಿರ್ಮಾಣವಾಗುತ್ತಿದ್ದು ಕೂಡಲೇ ತೆರವುಗೊಳಿಸಲು ಹಾಗೂ ಒಣ ತ್ಯಾಜ್ಯವನ್ನು ಸಂಗ್ರಹಿಸುವ ಗಾಡಿ ವೇಗವಾಗಿ ಬರುತ್ತಿರುವುದರಿಂದ ಒಣ ತ್ಯಾಜ್ಯ ಸಂಗ್ರಹಣೆ ಸಮರ್ಪಕವಾಗಿರುವುದಿಲ್ಲ, ವಿದ್ಯಾರಣ್ಯಪುರ ವ್ಯಾಪ್ತಿಯಲ್ಲಿ ಎಲ್ಲೆಂದರಲ್ಲಿ ಬ್ಲಾಕ್‌ಸ್ಪಾಟ್‌ಗಳು ಹೆಚ್ಚಾಗುತ್ತಿರುವುದರಿಂದ ಸಮರ್ಪಕವಾಗಿ ಮನೆ ಮನೆಗಳಿಂದ ಹಸಿ ತ್ಯಾಜ್ಯ ಹಾಗೂ ಒಣ ತ್ಯಾಜ್ಯ ಸಂಗ್ರಹಣಾ ಕಾರ್ಯ ನಿರ್ವಹಿಸಲು ಕೋರಿದರು.

**ಕ್ರಮ:** ಸ.ಕಾ.ಅ, ಘ.ತ್ಯಾ.ನಿ

ವಾರ್ಡಿನ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಆದಷ್ಟು ಬೇಗ ಮುಚ್ಚಲು ಕ್ರಮ ವಹಿಸಲು ಕೋರಿದರು, ದೇಶಬಂಧುನಗರದ ಕೆನರಾ ಬ್ಯಾಂಕ್ ಲೇಔಟ್, ಗುರುದರ್ಶನ್ ಲೇಔಟ್, ಜ್ಞಾನೇಶ್ವರಿ ಲೇಔಟ್, ಸಪ್ತಗಿರಿ ಬಡಾವಣೆಗಳ ರಸ್ತೆಗಳ ಚರಂಡಿಗಳಲ್ಲಿ ತುಂಬಿರುವ ಹೂಳು ಮತ್ತು ಮಣ್ಣನ್ನು ತೆರವುಗೊಳಿಸಲು ಕೋರಿದರು.

ಕ್ರಮ: ಸ.ಕಾ.ಅ, ವಿಉವಿ

ನೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 09, ವಿದ್ಯಾರಣ್ಯಪುರ

ನೋಡಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಿದ್ಯಾರಣ್ಯಪುರ ಉಪವಿಭಾಗ